# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.02 | Issue. 240 | Pages. 2 | Date: 04-09-2026, FRIDAY RNI NO: KARKAN/2024/89601 Kannada Daily

ಸಂಪುಟ : 02 - ಸಂಚಿಕೆ : 240 - ಪುಟಗಳು : 2 04-09-2026 ಶುಕ್ರವಾರ Ph: 8762954248 ದರ : ₹1


# ಡಾ. ಗುರುರಾಜ್ ಹೆಬ್ಬಾರ್ ಸೇವೆ ಸ್ಮರಣೀಯ

## ಹಿಮ್ಸ್‌ನ ಧರ್ಮಛತ್ರದಲ್ಲಿ ಪುಣ್ಯ ಸ್ಮರಣೆ | ವೈದ್ಯರಿಂದ ಸಮಾಜ ಸೇವಕನಿಗೆ ಗೌರವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಸಮಾಜ ಸೇವೆ, ಕಷ್ಟದಲ್ಲಿರುವವರಿಗೆ ನೆರವು, ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಮಿಡಿದ ಹಾಗೂ ವಯೋವೃದ್ಧರಿಗೆ ಆಸರೆ ಕಲ್ಪಿಸಿದ ದಿ. ಡಾ. ಗುರುರಾಜ್ ಹೆಬ್ಬಾರ್ ಅವರ ಸೇವೆ ಅನುಪಮ ಎಂದು ಹಿಮ್ಸ್ ನಿರ್ದೇಶಕ ಡಾ. ರಾಜಣ್ಣ ಹೇಳಿದರು.



ನಗರದ ಹಾಸನಾಂಬ ಧರ್ಮಛತ್ರ ಸಮಿತಿ ಮತ್ತು ಹಿಮ್ಸ್ ವತಿಯಿಂದ ಧರ್ಮಛತ್ರ ಕಟ್ಟಡದ 2ನೇ ಮಹಡಿಯಲ್ಲಿ ಗುರುವಾರ ನಡೆದ ರಾಜ್ಯೋತ್ಸವ ಪುರಸ್ಕೃತ ದಿ. ಡಾ. ಗುರುರಾಜ ಹೆಬ್ಬಾರ್ ಅವರ 4ನೇ ಪುಣ್ಯ ಸ್ಮರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಜ್ಜನರಾಗಿದ್ದ ಡಾ. ಹೆಬ್ಬಾರ್ ವೈದ್ಯರಾಗಿ ವೈದ್ಯೋ ನಾರಾಯಣ ಹರಿಃ ಎಂಬ ಮಾತಿಗೆ ಅನ್ವರ್ಥವಾಗಿ ಬದುಕಿದ್ದರು. ನಮ್ಮ ಆಸ್ಪತ್ರೆಗೆ ಬರುವ ಬಡ ರೋಗಿಗಳ ಆರೈಕೆದಾರರಿಗಾಗಿ ಧರ್ಮಛತ್ರ ಕಟ್ಟಿದರು. ಅದರಿಂದ ಸಾವಿರಾರು ಜನರಿಗೆ ಉಪಯೋಗವಾಗುತ್ತಿದೆ. ರೋಗಿಗಳ ಕಡೆಯವರು ಉಳಿಯಲು ವಸತಿ, ಸ್ನಾನ ಗೃಹ ಮತ್ತು ಅವರ ವಸ್ತುಗಳನ್ನಿಡಲು ಕೀ ಲಾಕರ್ ವ್ಯವಸ್ಥೆ ಮಾಡಲಾಗಿದೆ. ಹೆಬ್ಬಾರ್ ಅವರ ಆದರ್ಶ ಗುಣಗಳನ್ನು ನಾವೆಲ್ಲರೂ ಪಾಲಿಸಬೇಕು ಎಂದರು.

ಜಿಲ್ಲಾ ರೆಡ್ ಕ್ರಾಸ್ ಸಭಾಪತಿ ಮತ್ತು ಡಾ. ಗುರುರಾಜ್ ಹೆಬ್ಬಾರ್ ಅಭಿನಂದನಾ ಸಮಿತಿ ಅಧ್ಯಕ್ಷ ಹೆಚ್.ಪಿ.ಮೋಹನ್ ಮಾತನಾಡಿ, ಜಿಲ್ಲೆಯಲ್ಲಿ ಡಾ. ಗುರುರಾಜ್ ಹೆಬ್ಬಾರ್ ಅವರಿಗೆ ಇದ್ದ ದೂರದೃಷ್ಟಿ ಯಾರಿಗೂ ಇಲ್ಲ. ಜನ ಸೇವೆಯೇ ಜನಾರ್ದನ ಸೇವೆ ಎಂಬ ತತ್ವಕ್ಕೆ ಬದ್ಧರಾಗಿದ್ದರು. ಹೆಬ್ಬಾರ್ ಅವರು ಅನೇಕ ಸಮಾಜಮುಖಿ ಕಾರ್ಯಕ್ರಮಗಳಾದ ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆ, ಸಂಜೀವಿನಿ ಸಹಕಾರಿ ಆಸ್ಪತ್ರೆ, ಚೈತನ್ಯ ಮಂದಿರ, ಕಾಮಧೇನು ಸಹಕಾರಿ ವಿದ್ಯಾಶ್ರಮ, ರೈತ ಬಂಧು ಸಹಕಾರ ಸಂಘಗಳ ನೇತೃತ್ವ ವಹಿಸಿದ್ದರು. ಇಂತವರು ನಮ್ಮ ಜೊತೆ ಇದ್ದಿದ್ದೇ ನಮ್ಮ ಪುಣ್ಯವೆಂದರು.

ಜನಪ್ರಿಯ ಆಸ್ಪತ್ರೆ ಮತ್ತು ಸಮೂಹ ಸಂಸ್ಥೆಗಳ ಮುಖ್ಯಸ್ಥ ಡಾ. ವಿ.ಕೆ.ಅಬ್ದುಲ್ ಬಶೀರ್ ಅವರು ಮಾತನಾಡಿ, 1996ರಲ್ಲಿ ಹಾಸನದಲ್ಲೇ ಡಿಪ್ಲೊಮಾ ಪದವಿ ಮುಗಿಸಿದ ನಾನು ಇಲ್ಲೇ ನೆಲೆಸಲು ಮುಖ್ಯ ಕಾರಣ ನನ್ನ ಗುರುಗಳಾದ ಡಾ. ಗುರುರಾಜ ಹೆಬ್ಬಾರ್. ಅವರನ್ನು ಭೇಟಿ ಮಾಡಲು ಯಾರೇ ಹೋದರು ಪ್ರೀತಿ, ಕಾಳಜಿ ತೋರುತ್ತಿದ್ದರು. ಅವರ ಸ್ನೇಹ ಬೆಳೆದ ಬಳಿಕ ಸಂಜೀವಿನಿ ಆಸ್ಪತ್ರೆಯಲ್ಲಿ ಕೆಲಸ ಮಾಡಲು ಅವಕಾಶ ಕೇಳಿದೆ. ಅದಕ್ಕೆ ಒಪ್ಪಿದ ಹಿರಿಯರು ಮರುದಿನವೇ ನನಗೆ ಅಪಾಯಿಂಟ್‌ಮೆಂಟ್ ಲೆಟರ್ ಕೊಡಿಸಿದರು. 1 ವರ್ಷ ಸಂಜೀವಿನಿ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸಿ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಕೆಎಂಸಿ ಮಣಿಪಾಲ್‌ಗೆ ಹೋಗಿದ್ದೆ. ಅದಾದ ಮೇಲೆ ಪ್ರತಿ ಹಂತದಲ್ಲೂ ಅವರು ನನಗೆ ಬೆಂಬಲವಾಗಿ ನಿಂತು ಬೆಳೆಸಿದರು. ಅವರ ಬಗ್ಗೆ ಎಷ್ಟು ಹೇಳಿದರೂ ಸಾಲದು ಎಂದು ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಪ್ರತಿಭಾ ರಾಘವೇಂದ್ರ, ಡಾ. ಕಾವ್ಯಶ್ರೀ, ಹಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ. ರಾಘವೇಂದ್ರ ಪ್ರಸಾದ್, ಪ್ರಾಂಶುಪಾಲರಾದ ಡಾ.ಕವಿತಾ, ಡಾ. ಪ್ರವೀಣ್, ಡಾ. ಮನುಪ್ರಕಾಶ್, ಹಿಮ್ಸ್ ಆಸ್ಪತ್ರೆ ಡಾ. ಪ್ರಕಾಶ್, ನಿಶ್ಚಿತ ಕುಮಾರಿ, ಮುತ್ತತ್ತಿ ರಾಜಣ್ಣ, ಮಹಾವೀರ್ ಬನ್ಸಾಲಿ, ಚಂದ್ರಶೇಖರ್, ಶಬೀರ್ ಅಹಮದ್ ಮತ್ತು ಕಾಲೇಜು ಸಿಬ್ಬಂದಿ ಇದ್ದರು.

# ದೊಡ್ಡಮತಿಘಟ್ಟದಲ್ಲಿ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಕೃಷಿಯಲ್ಲಿ ರಾಸಾಯನಿಕ ಕೀಟನಾಶಕಗಳ ಮೇಲಿನ ಅವಲಂಬನೆ ಕಡಿಮೆ ಮಾಡಿ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಬೆಳೆ ಸಂರಕ್ಷಣಾ ಕ್ರಮಗಳನ್ನು ಉತ್ತೇಜಿಸುವ ಉದ್ದೇಶದಿಂದ ದೊಡ್ಡಮತಿಘಟ್ಟ ಗ್ರಾಮದಲ್ಲಿ ಜೈವಿಕ ಕೀಟನಾಶಕಗಳು ಮತ್ತು ಅವುಗಳ ಬಳಕೆ ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.

ಹಾಸನದ ಕಾರೆಕೆರೆ ಕೃಷಿ ಮಹಾವಿದ್ಯಾಲಯ ಅಂತಿಮ ವರ್ಷದ ಬಿಎಸ್ಸಿ ಕೃಷಿ ವಿದ್ಯಾರ್ಥಿಗಳು ಚನ್ನರಾಯಪಟ್ಟಣ ತಾಲ್ಲೂಕಿನ ದೊಡ್ಡಮತಿಘಟ್ಟ ಗ್ರಾಮದಲ್ಲಿ ಹಮ್ಮಿಕೊಂಡಿರುವ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಶಿಬಿರ ಆಯೋಜಿಸಲಾಗಿತ್ತು.

ಡಾ. ಸೌಮ್ಯ ಹಾಗೂ ಡಾ. ನಮ್ರತಾ ಅವರು ರೈತರಿಗೆ ಜೈವಿಕ ಕೀಟನಾಶಕಗಳ ಮಹತ್ವ, ವಿಧಗಳು, ಬಳಕೆಯ ವಿಧಾನ ಹಾಗು ಬೆಳೆಗಳಲ್ಲಿ ಕೀಟ ಮತ್ತು ರೋಗಗಳ ನಿರ್ವಹಣೆಯಲ್ಲಿ ಪಾತ್ರದ ಕುರಿತು ಮಾಹಿತಿ ನೀಡಿದರು. ಜೈವಿಕ ಕೀಟನಾಶಕಗಳು, ಸೂಕ್ಷ್ಮಜೀವಿಗಳು ಅಥವಾ ನೈಸರ್ಗಿಕ ಮೂಲಗಳಿಂದ ದೊರೆಯುವ ವಸ್ತುಗಳನ್ನು ಆಧರಿಸಿದ್ದು, ಬೆಳೆಗಳಲ್ಲಿನ ಕೀಟ ಮತ್ತು ರೋಗಕಾರಕಗಳನ್ನು ನಿಯಂತ್ರಿಸಲು ಬಳಸಬಹುದಾಗಿದೆ ಎಂದರು.

ಜೈವಿಕ ಕೀಟನಾಶಕಗಳ ಬಳಕೆಯಿಂದ ಮಣ್ಣಿನ ಆರೋಗ್ಯ ಹಾಗು ಪರಿಸರ ಕಾಪಾಡಿಕೊಳ್ಳುವಲ್ಲಿ ಸಹಾಯವಾಗುತ್ತದೆ. ರಾಸಾಯನಿಕ ಕೀಟನಾಶಕಗಳ ಅತಿಯಾದ ಮತ್ತು ಅಸಮರ್ಪಕ ಬಳಕೆಯಿಂದ ಉಂಟಾಗಬಹುದಾದ ಕೀಟಗಳ ಪ್ರತಿರೋಧ, ಪರಿಸರ ಮಾಲಿನ್ಯ ಹಾಗು ಆಹಾರದಲ್ಲಿ ಕೀಟನಾಶಕ ಅವಶೇಷಗಳಂತಹ ಸಮಸ್ಯೆಗಳನ್ನು ಕಡಿಮೆ ಮಾಡುವಲ್ಲಿ ಜೈವಿಕ ವಿಧಾನಗಳು ಮಹತ್ವದ ಪಾತ್ರ ವಹಿಸಬಹುದು ಎಂದು ವಿದ್ಯಾರ್ಥಿಗಳು ತಿಳಿಸಿದರು.

ಟ್ರೈಕೋಡರ್ಮಾ ಮುಂತಾದ ಜೈವಿಕ ನಿಯಂತ್ರಣಕಾರಕಗಳನ್ನು ಮಣ್ಣಿನಿಂದ ಹರಡುವ ರೋಗಗಳ ನಿರ್ವಹಣೆಯಲ್ಲಿ ಬಳಸುವ ಕುರಿತು ಮಾಹಿತಿ ನೀಡಲಾಯಿತು.

# ಭೀಕರ ಅಪಘಾತದಲ್ಲಿ ವ್ಯಕ್ತಿ ಸಾವು-ನಾಲ್ವರಿಗೆ ಗಾಯ




**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಸಕಲೇಶಪುರ: ಕೆಎಸ್‌ಆರ್‌ಟಿಸಿ ಬಸ್ ಹಾಗೂ ಬೊಲೆರೋ ಪಿಕಪ್ ವಾಹನದ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಓರ್ವ ಸ್ಥಳದಲ್ಲೇ ಮೃತಪಟ್ಟಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ತಾಲೂಕಿನ ಮಾರನಹಳ್ಳಿ ಸಮೀಪ ಗುರುವಾರ ನಡೆದಿದೆ.

ಮೃತರನ್ನು ದಿನೇಶ್ (38) ಎಂದು ಗುರುತಿಸಲಾಗಿದ್ದು, ಸುಬ್ರಹ್ಮಣ್ಯ, ವೆಂಕಟರಮಣ, ಜಿತೇಂದ್ರ ಹಾಗೂ ದುರ್ಗಾಪ್ರಸಾದ್ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಸಕಲೇಶಪುರದ ಕ್ರಾಫರ್ಡ್ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಐಸಿಐಸಿಐ ಬ್ಯಾಂಕ್‌ಗೆ ಸೇರಿದ ಬೊಲೆರೋ ಪಿಕಪ್ ವಾಹನವು ಎಟಿಎಂಗಳಿಗೆ ಹಣ ತುಂಬಲು ತೆರಳುತ್ತಿತ್ತು. ಪಿಕಪ್ ಹಾಗೂ ಮಂಗಳೂರಿನಿಂದ ಬೆಂಗಳೂರಿನತ್ತ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ನಡುವೆ ಅಪಘಾತ ಸಂಭವಿಸಿದೆ.

ಗಾಯಾಳುಗಳು ಕೊಡಗು ಹಾಗೂ ಮಂಗಳೂರು ಮೂಲದವರು ಎಂದು ತಿಳಿದುಬಂದಿದೆ. ಅಪಘಾತದ ತೀವ್ರತೆಗೆ ಪಿಕಪ್ ವಾಹನದ ಮುಂಭಾಗ ಸಂಪೂರ್ಣ ಜಖಂಗೊಂಡಿದ್ದು, ಸ್ಥಳೀಯರು ಹಾಗೂ ವಾಹನ ಸವಾರರು ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಲು ನೆರವಾದರು.

ಘಟನಾ ಸ್ಥಳಕ್ಕೆ ಸಕಲೇಶಪುರ ಗ್ರಾಮಾಂತರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಮಾಸದ ನೆನಪುಗಳಿಗೆ ಛಾಯಾಚಿತ್ರವೇ ಆಧಾರ

## ತಾಲ್ಲೂಕು ಛಾಯಾಗ್ರಾಹಕರ ಸಂಘದಿಂದ 187ನೇ ಫೋಟೋಗ್ರಫಿ ದಿನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಒಂದು ಫೋಟೊ ಅನೇಕ ಕಥೆ ಹೇಳುತ್ತದೆ. ಕ್ಷಣಿಕ ಘಟನೆಗಳನ್ನು ನೆನಪಿನಲ್ಲಿ ಉಳಿಸುವ ಅಪೂರ್ವ ಕಾರ್ಯವನ್ನು ಛಾಯಾಗ್ರಾಹಕರು ಮಾಡುತ್ತಾರೆ ಎಂದು ರಾಜ್ಯ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಅಭಿಪ್ರಾಯಪಟ್ಟರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ತಾಲ್ಲೂಕು ಛಾಯಾಗ್ರಾಹಕರ ಸಂಘದಿಂದ ಗುರುವಾರ ಆಯೋಜಿಸಿದ್ದ 187ನೇ ವಿಶ್ವ ಛಾಯಾಗ್ರಹಣ ದಿನಾಚರಣೆ, ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿ, ಕಪ್ಪು-ಬಿಳುಪು ಛಾಯಾಗ್ರಹಣದಿಂದ ಆರಂಭಗೊಂಡು ಇಂದಿನ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ತಂತ್ರಜ್ಞಾನವರೆಗೆ ಛಾಯಾಗ್ರಹಣ ಕ್ಷೇತ್ರ ಸಾಕಷ್ಟು ಬದಲಾವಣೆ ಕಂಡಿದೆ. ಇಂದು ಮೊಬೈಲ್ ಹೊಂದಿರುವ ಪ್ರತಿಯೊಬ್ಬರೂ ಚಿತ್ರ ತೆಗೆಯಬಹುದಾದರೂ, ಕೇವಲ ಕ್ಯಾಮರಾ ಹೊಂದಿದಾಕ್ಷಣ ವೃತ್ತಿಪರ ಛಾಯಾಗ್ರಾಹಕರಾಗಲು ಸಾಧ್ಯವಿಲ್ಲ. ಚಿತ್ರಕ್ಕೆ ಸೂಕ್ತ ದೃಷ್ಟಿಕೋನ, ಚಿಂತನೆ ಮತ್ತು ಸೃಜನಶೀಲತೆ ನೀಡುವ ಸಾಮರ್ಥ್ಯ ವೃತ್ತಿಪರ ಛಾಯಾಗ್ರಾಹಕರಿಗಿದೆ ಎಂದರು.




ಯಾವುದೇ ಕಾರ್ಯಕ್ರಮ ಅಥವಾ ಘಟನೆ ನಡೆದಾಗ ನಾವು ತಡವಾಗಿ ಸ್ಥಳಕ್ಕೆ ತೆರಳಿದರೆ ಆ ಕ್ಷಣವನ್ನು ಮತ್ತೆ ಪಡೆಯಲು ಸಾಧ್ಯವಿಲ್ಲ. ಅದನ್ನೇ ಕ್ಯಾಮರಾದಲ್ಲಿ ಸೆರೆ ಹಿಡಿದು ಶಾಶ್ವತ ನೆನಪಾಗಿ ಉಳಿಸುವವರು ಛಾಯಾಗ್ರಾಹಕರು. ಸಮಾಜದ ಆಗು ಹೋಗುಗಳಿಗೆ ಸಾಕ್ಷಿಯಾಗುವುದರ ಜೊತೆಗೆ ಒಂದು ಉತ್ತಮ ಚಿತ್ರ ಸಮಾಜಕ್ಕೆ ಪ್ರಬಲ ಸಂದೇಶವನ್ನೂ ನೀಡಬಲ್ಲದು ಎಂದು ಹೇಳಿದರು.

ಮಾಧ್ಯಮ ಕ್ಷೇತ್ರದಲ್ಲಿ ಸುದ್ದಿಗೆ ಜೀವಂತಿಕೆ ನೀಡುವಲ್ಲಿ ಛಾಯಾಚಿತ್ರದ ಪಾತ್ರ ಮಹತ್ವದ್ದು. ಆಧುನಿಕ ತಂತ್ರಜ್ಞಾನ ಎಷ್ಟೇ ಮುಂದುವರಿದರೂ ವಾಸ್ತವವನ್ನು ದಾಖಲಿಸುವ ವೃತ್ತಿಪರ ಛಾಯಾಗ್ರಾಹಕರ ಅಗತ್ಯ ಎಂದಿಗೂ ಕಡಿಮೆಯಾಗುವುದಿಲ್ಲ ಎಂದು ಅಭಿಪ್ರಾಯಪಟ್ಟರು.

ಛಾಯಾಗ್ರಾಹಕರು ತಮ್ಮ ಸಂಘಟನೆಯನ್ನು ಮತ್ತಷ್ಟು ಬಲಪಡಿಸಿಕೊಳ್ಳಬೇಕು. ಎಲ್ಲರೂ ಸಂಘಟನೆ, ಒಗ್ಗಟ್ಟಿನಿಂದ ಇದ್ದರಷ್ಟೇ ಸರ್ಕಾರದಿಂದ ವಿವಿಧ ಸೌಲಭ್ಯ ಪಡೆಯಲು ಸಾಧ್ಯ. ವಿಶೇಷವಾಗಿ ಛಾಯಾಗ್ರಾಹಕರಿಗೆ ಆರೋಗ್ಯ, ಅಪಘಾತ ವಿಮೆ ಸೇರಿ ಅಗತ್ಯ ಸೌಲಭ್ಯಗಳು ದೊರೆಯುವಂತಾಗಬೇಕು. ಸದಸ್ಯರಲ್ಲಿ ಪರಸ್ಪರ ನಂಬಿಕೆ ಮೂಡಿಸುವ ಹಾಗು ಸಂಕಷ್ಟದ ಸಂದರ್ಭದಲ್ಲಿ ಕುಟುಂಬಗಳಿಗೆ ನೆರವಾಗುವ ರೀತಿಯಲ್ಲಿ ಸಂಘಟನೆ ಕಾರ್ಯನಿರ್ವಹಿಸಬೇಕೆಂದು ಕರೆ ನೀಡಿದರು.

ಇದೇ ವೇಳೆ ಇತ್ತೀಚೆಗೆ ನಿಧನರಾದ ನಂದಿ ಸ್ಟುಡಿಯೋ ಮಾಲೀಕ ನಂದಕುಮಾರ್ ಅವರ ಕುಟುಂಬಕ್ಕೆ ಕೆಪಿಎ ಆಸರೆ ಯೋಜನೆಯಡಿ 75 ಸಾವಿರ ರೂ. ಚೆಕ್ ವಿತರಿಸಲಾಯಿತು. ಅಲ್ಲದೆ ಛಾಯಾಗ್ರಾಹಕರ ಕುಟುಂಬದ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಛಾಯಾಗ್ರಾಹಕರ ನೂತನ ಕಟ್ಟಡ ನಿರ್ಮಾಣಕ್ಕೆ ಧನಸಹಾಯ ಮಾಡಿದ ಛಾಯಾಗ್ರಾಹಕರನ್ನೂ ಸನ್ಮಾನಿಸಿ ಗೌರವಿಸಲಾಯಿತು. ಅದಕ್ಕೂ ಮೊದಲು ನಗರದ ಪ್ರಮುಖ ರಸ್ತೆಗಳಲ್ಲಿ ಛಾಯಾಗ್ರಾಹಕರು ಬೈಕ್ ರ್ಯಾಲಿ ನಡೆಸಿದರು.

ತಾಲ್ಲೂಕು ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಎಸ್.ಜಿ.ನಾಗರಾಜು, ಜಿಲ್ಲಾ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ನಿಂಗರಾಜು (ಸ್ವಾಮಿ), ಕಾರ್ಯದರ್ಶಿ ಧರ್ಮಶೆಟ್ಟಿ, ಸಂಸ್ಥಾಪಕ ಅಧ್ಯಕ್ಷ ವಿ.ಟಿ.ಆರ್. ರಮೇಶ್, ರಾಜ್ಯ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಹೆಚ್.ಎಸ್. ನಾಗೇಶ್, ರಾಜ್ಯ ಕಾರ್ಯದರ್ಶಿ ಸುರೇಶ್, ವಕೀಲರಾದ ಜಿ. ಸಂಜಯ್, ಪ್ರಮೋದ್‌ಗೌಡ, ರವಿಶಂಕರ್ ಮೊದಲಾದವರಿದ್ದರು. ಲಕ್ಷ್ಮೀನಾರಾಯಣ್ ಕಾರ್ಯಕ್ರಮ ನಿರೂಪಿಸಿದರು.

# ಶಿಕ್ಷಣದ ಜೊತೆಗೆ ವೃತ್ತಿ ಆಧಾರಿತ ಕೌಶಲ ಅಗತ್ಯ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ಶಿಕ್ಷಣದಲ್ಲಿ ಅಂಕಗಳ ಜೊತೆಗೆ ಮುಂದಿನ ಜೀವನಕ್ಕಾಗಿ ವೃತ್ತಿ ಆಧಾರಿತ ಕೌಶಲವನ್ನು ಕಲಿಯಬೇಕಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ಹೋಬಳಿ ಘಟಕದ ಅಧ್ಯಕ್ಷ ಶಿವರಾಜ್ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಗ್ರಾಮದ ಬಾಲಕರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ ವಿತರಿಸಿ ಮಾತನಾಡಿ, ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಹೊಸ ವಿಷಯಗಳ ಆವಿಷ್ಕಾರಗಳು ನಡೆಯುತ್ತಿವೆ. ನಾವು ತಂತ್ರಜ್ಞಾನವನ್ನು ಬಳಸಿಕೊಂಡು ಬದುಕನ್ನು ನಡೆಸಬೇಕಿದೆ. ಅದಕ್ಕೆ ತಕ್ಕಂತೆ ವಿದ್ಯಾಭ್ಯಾಸ ಮಾಡಬೇಕಿದೆ ಎಂದರು.

ಮುಖ್ಯ ಶಿಕ್ಷಕಿ ಚಂದ್ರಕಲಾ ಮಾತನಾಡಿ, ಪ್ರತಿವರ್ಷ ಕರವೇ ಘಟಕದಿಂದ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕಗಳನ್ನು ನೀಡುತ್ತಿದ್ದಾರೆ. ಉತ್ತಮವಾಗಿ ಓದಿ ಶಾಲೆಗೆ, ಪೋಷಕರಿಗೆ ಹೆಸರು ತರಬೇಕು ಎಂದು ತಿಳಿಸಿದರು.

ಶಿಕ್ಷಕ ಹಿರಿಯಣ್ಣಗೌಡ ಮಾತನಾಡಿದರು. ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಮಹೇಶ್, ರವಿಕುಮಾರ್ ಮತ್ತು ಸಹ ಶಿಕ್ಷಕರು ಇದ್ದರು.

# ಆಹಾರ ತಯಾರಿಕೆಯಲ್ಲಿ ಕೃತಕ ಬಣ್ಣ: ತಡೆಗೆ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಸಾರ್ವಜನಿಕರ ಆರೋಗ್ಯ ಸುರಕ್ಷತೆ ದೃಷ್ಟಿಯಿಂದ ಆಹಾರ ತಯಾರಿಕೆಯಲ್ಲಿ ಕೃತಕ ಬಣ್ಣಗಳ ಬಳಕೆ ಹಾಗೂ ರುಚಿಗೆ ಬಳಸುವ ಪದಾರ್ಥಗಳನ್ನು ಬಳಸುವದನ್ನು ತಡೆಯುವ ಮೂಲಕ ಗುಣಮಟ್ಟದ ಆಹಾರವನ್ನು ಒದಗಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಆಹಾರ ಸುರಕ್ಷತೆ ಕುರಿತು ವಿಡಿಯೋ ಸಂವಾದದ ಮೂಲಕ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು ಆಹಾರ ತಯಾರಿಕೆಯಲ್ಲಿ ಕೃತಕ ಬಣ್ಣಗಳ ಬಳಕೆ ಮಾಡುವುದರಿಂದ ಕ್ಯಾನ್ಸರ್ ನಂತಹ ರೋಗಗಳು ಕಂಡು ಬರುತ್ತಿವೆ, ಆಹಾರ ತಯಾರಿಕೆಯಲ್ಲಿ ಕೃತಕ ಬಣ್ಣಗಳ ಬಳಕೆಯನ್ನು ಕಡ್ಡಾವಾಗಿ ತಡೆಯುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಹೋಟೆಲ್, ಹೋಂ ಸ್ಟೆ, ರೆಸಾರ್ಟ್‌ಗಳಲ್ಲಿ ಅಡುಗೆ ತಯಾರಿಸುವ ಸಿಬ್ಬಂದಿಗೆ ಅಗತ್ಯ ತರಬೇತಿ ನೀಡಬೇಕು. ಆಹಾರಕ್ಕೆ ಸಂಬಂಧಿಸಿ ಯಾವುದೇ ನ್ಯೂನ್ಯತೆಗಳು ಕಂಡುಬಂದರೆ ಗ್ರಾಹಕರು ದೂರು ಸಲ್ಲಿಸಲು ನೆರವಾಗುವಂತೆ ಸೌಲಭ್ಯ ಕಲ್ಪಿಸುವಂತೆ ತಿಳಿಸಿದರು.

ತಾಲ್ಲೂಕುವಾರು ತಂಡ ರಚಿಸಿ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರಲ್ಲದೆ, ಅವಧಿ ಮೀರಿದ ಆಹಾರ ಪದಾರ್ಥಗಳನ್ನು ನಾಗರಿಕರಿಗೆ ನೀಡುವುದನ್ನು ತಡೆಗಟ್ಟಬೇಕು ಈ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ, ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

## ಸೆ.9ರಂದು ಅನುಸೂಚಿತ ಬುಡಕಟ್ಟುಗಳ ಆಯೋಗ ಅಧ್ಯಕ್ಷರ ಭೇಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ. ಎಲ್. ಮೂರ್ತಿ ಮತ್ತು ಸದಸ್ಯರಾದ ಎಂ.ಕುಂಬಯ್ಯ, ಎಂ.ಸುನೀಲ್, ಉಕ್ಕಲಿ, ಎನ್. ದಿವಾಕರ್, ಗೀತಾ ಥಾಂವಶಿ ಹಾಗೂ ಕಾರ್ಯದರ್ಶಿಗಳಾದ ಡಾ.ಹೆಚ್.ಎಸ್ ಶಿವರಾಮು ಸೆ.9 ರಂದು ಹಾಸನಕ್ಕೆ ಆಗಮಿಸಲಿದ್ದಾರೆ.

ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ, ಪೊಲೀಸ್ ಅಧೀಕ್ಷಕರು ಮತ್ತು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಸಂಘ ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಸಭೆ ಹಾಗೂ ಅಹವಾಲು ಸ್ವೀಕೃತಿ, ಮಧ್ಯಾಹ್ನ 2.15ಕ್ಕೆ ಪತ್ರಿಕಾ ಗೋಷ್ಠಿ ನಡೆಸುವರು, ಅಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳೊಂದಿಗೆ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

# ಹಿಂದು ಗಣೋಶೋತ್ಸವಕ್ಕೆ ಅಧಿಕೃತ ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ನಗರದ ಅದ್ದೂರಿ ಗಣೇಶೋತ್ಸವ ಎಂದೇ ಖ್ಯಾತಿ ಪಡೆದಿರುವ ಪಾಂಚಜನ್ಯ ಗಣಪತಿ ಉತ್ಸವಕ್ಕೆ ಸಿದ್ಧತೆ ನಡೆದಿದ್ದು ಗುರುವಾರ ಮಹಾವೀರ ವೃತ್ತದಲ್ಲಿ ಗೋ, ಭಾರತ ಮಾತೆ ಪೂಜೆ ಹಾಗೂ ಧ್ವಜಾರೋಹಣ ನೆರವೇರಿಸಲಾಯಿತು.



ಪೂಜಾ ಕೈಂಕರ್ಯ ನೆರವೇರಿಸಿ ಮಾತನಾಡಿದ ತಣ್ಣೀರುಹಳ್ಳ ಮಠದ ಶ್ರೀ ವಿಜಯಕುಮಾರ ಸ್ವಾಮೀಜಿ, ಸಮಾಜದ ಎಲ್ಲಾ ವರ್ಗದ ಜನರು ಪರಸ್ಪರ ಪ್ರೀತಿ, ವಿಶ್ವಾಸ ಹಾಗೂ ಸಹೋದರತ್ವದಿಂದ ಬದುಕಬೇಕು. ಸಂಘಟನೆಯ ಮೂಲಕ ಸಮಾಜವನ್ನು ಬಲಪಡಿಸುವ ಅಗತ್ಯವಿದ್ದು, ಬಸವಣ್ಣನವರ ಇವ ನಮ್ಮವ ಎಂಬ ಆಶಯದಂತೆ ಒಗ್ಗಟ್ಟಿನಿಂದ ಮುನ್ನಡೆಯಬೇಕು ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಮಾತನಾಡಿ, ಗಣೇಶೋತ್ಸವವು ಏಕತೆ ಹಾಗೂ ಸಾಂಸ್ಕೃತಿಕ ಪರಂಪರೆಯ ಪ್ರತೀಕವಾಗಿದೆ. ಗೋ ಪೂಜೆ ಮತ್ತು ಧ್ವಜಾರೋಹಣದೊಂದಿಗೆ ಹಿಂದು ಮಹಾಗಣಪತಿ ಪ್ರತಿಷ್ಠಾಪನೆಯ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಜಿಲ್ಲೆಯಲ್ಲಿ ಪಾಂಚಜನ್ಯ ಗಣಪತಿ ಎಂದೇ ಪ್ರಸಿದ್ಧಿ ಪಡೆದಿರುವ ಈ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಸಿದ್ಧತೆ ನಡೆಸಲಾಗಿದೆ ಎಂದರು.

ನಗರದ ವಿವಿಧ ಪ್ರಮುಖ ಮಾರ್ಗಗಳಲ್ಲಿ ಗಣಪತಿ ಮೆರವಣಿಗೆ ನಡೆಸಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಪಾಲ್ಗೊಳ್ಳುವಂತೆ ಕಾರ್ಯಕ್ರಮ ರೂಪಿಸಲಾಗುತ್ತಿದೆ. ಧಾರ್ಮಿಕ ಆಚರಣೆಯ ಜೊತೆಗೆ ಸಾಮಾಜಿಕ ಹಾಗು ಸಾಂಸ್ಕೃತಿಕ ಸಂದೇಶವನ್ನು ಸಾರುವ ಉತ್ಸವವಾಗಿ ಗಣೇಶೋತ್ಸವ ಹೊರ ಹೊಮ್ಮಲಿದೆ ಎಂದು ಹೇಳಿದರು.

ವಿಶ್ವ ಹಿಂದು ಪರಿಷತ್ ರಾಜ್ಯ ಸಹಕಾರ್ಯದರ್ಶಿ ಮಹಿಪಾಲ್ ಮಾತನಾಡಿ, ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಲೋಕಮಾನ್ಯ ತಿಲಕರು ಜನರನ್ನು ಒಗ್ಗೂಡಿಸುವ ಉದ್ದೇಶದಿಂದ ಸಾರ್ವಜನಿಕ ಗಣೇಶೋತ್ಸವಕ್ಕೆ ಚಾಲನೆ ನೀಡಿದ್ದರು. ಅಂದಿನಿಂದ ಉತ್ಸವವು ಸಾಮಾಜಿಕ ಒಗ್ಗಟ್ಟು ಮತ್ತು ರಾಷ್ಟ್ರೀಯ ಚಿಂತನೆ ಬೆಳೆಸುವ ಪ್ರಮುಖ ವೇದಿಕೆಯಾಗಿ ಬೆಳೆದಿದೆ ಎಂದು ಹೇಳಿದರು.

ಮುಖಂಡರಾದ ವಾಸುದೇವ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ನಗರಸಭೆ ಮಾಜಿ ಅಧ್ಯಕ್ಷ ಆರ್.ಮೋಹನ್, ರಕ್ಷಿತ್ ಶೆಟ್ಟಿ, ಪ್ರದೀಪ್ ಶರ್ಮ, ವಿಜಯಕುಮಾರ್, ಮೋಹನ್, ಸಾಯಿ ಪ್ರಸಾದ್, ದಯಾನಂದ್, ರಾಜೀವ್, ಪ್ರಸನ್ನಕುಮಾರ್, ಸುರೇಶ್ ಇತರರಿದ್ದರು.

# ಬರಗಾಲದಲ್ಲಿ ಬಡವರಿಗೆ ಆಸರೆಯಾದ ವಿಬಿ-ಜಿ ರಾಮ್ ಜಿ

## ಜಿ.ಪ.ನಿಂದ 30 ಸಾವಿರ ಕಾಮಗಾರಿ ಅನುಮೋದನೆ | 5 ಸಾವಿರ ಜನರಿಗೆ ಕೆಲಸ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗ್ರಾಮೀಣ ಉದ್ಯೋಗ ನೀತಿಯಲ್ಲಿ ಕ್ರಾಂತಿಕಾರಿ ಬದಲಾವಣೆಯೊಂದಿಗೆ ಅಸ್ತಿತ್ವ ಪಡೆದಿರುವ ವಿಬಿ-ಜಿ ರಾಮ್ ಜಿ ಯೋಜನೆ ಜು. 1 ರಿಂದ ಜಿಲ್ಲಾದ್ಯಂತ ಅನುಷ್ಠಾನಗೊಂಡಿದ್ದು, ಈ ವರೆಗೆ 30 ಸಾವಿರ ಕಾಮಗಾರಿಗೆ ಅನುಮೋದನೆ ದೊರೆತಿದೆ.

ಜಿಲ್ಲೆಯ 236 ಗ್ರಾಮ ಪಂಚಾಯಿತಿ ಪೈಕಿ 233 ಗ್ರಾ.ಪಂ.ಗಳಲ್ಲಿ 318 ಕಾಮಗಾರಿಗೆ ಚಾಲನೆ ನೀಡಲಾಗಿದೆ. ಗ್ರಾಮಸ್ಥರ ಅಗತ್ಯಕ್ಕೆ ಅನುಗುಣವಾಗಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ. ಅನುಮೋದನೆ ಪಡೆದಿರುವ ಸುಮಾರು 30 ಸಾವಿರ ಕಾಮಗಾರಿ ಪೈಕಿ 5 ಸಾವಿರ ಕೆಲಸಗಳು ಈಗಾಗಲೇ ಆರಂಭವಾಗಿವೆ. ಒಟ್ಟಾರೆ ಶೇ.25ರಷ್ಟು ಕಾಮಗಾರಿ ಪ್ರಾರಂಭಗೊಂಡಿದೆ.

ಯೋಜನೆಯಡಿ ಉದ್ಯೋಗದ ದಿನಗಳನ್ನು 100 ರಿಂದ 125 ದಿನಗಳಿಗೆ ವಿಸ್ತರಿಸಲಾಗಿದ್ದು, ಬಡ ಕುಟುಂಬಗಳಿಗೆ ವರ್ಷಕ್ಕೆ ಸುಮಾರು 47,760 ರೂ. ಆದಾಯ ದೊರೆಯುವ ಅವಕಾಶ ಕಲ್ಪಿಸಲಾಗಿದೆ. ಗ್ರಾಮೀಣ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು ವೈಯಕ್ತಿಕ, ಸಮುದಾಯ ಹಾಗೂ ನಾಗರಿಕರಿಗೆ ಅಗತ್ಯವಿರುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.

ಕಾಮಗಾರಿ ಅಗತ್ಯವಿರುವವರು ತಮ್ಮ ಗ್ರಾಮ ಪಂಚಾಯಿತಿಗೆ ತೆರಳಿ ಮನವಿ ಸಲ್ಲಿಸಬಹುದು. ಗ್ರಾಮ ಸಭೆಯಲ್ಲಿ ವಿಷಯವನ್ನು ಮಂಡಿಸಿ, ಅಗತ್ಯ ಕಾಮಗಾರಿಗಳ ಪ್ರಸ್ತಾವನೆಯನ್ನು ಜಿಲ್ಲಾ ಪಂಚಾಯಿತಿಗೆ ಕಳುಹಿಸಲಾಗುತ್ತದೆ. ಮೇಲ್ಮಟ್ಟದ ಅಧಿಕಾರಿಗಳು ಪರಾಮರ್ಶಿಸಿ ಅದಕ್ಕೆ ಅನುಮೋದನೆ ನೀಡುತ್ತಾರೆ. ಗ್ರಾಮೀಣ ಭಾಗದ ಜನರಿಗೆ ಇದು ಉತ್ತಮ ಉದ್ಯೋಗಾವಕಾಶವಾಗಿದ್ದು, ಅಗತ್ಯವಿರುವವರು ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ಅವರು ಮನವಿ ಮಾಡಿದ್ದಾರೆ.



> ಜುಲೈ 1 ರಿಂದ ಜಿಲ್ಲೆಯಲ್ಲಿ ವಿಬಿ-ಜಿ ರಾಮ್ ಜಿ ಯೋಜನೆ ಅನುಷ್ಠಾನಗೊಂಡಿದ್ದು 30 ಸಾವಿರ ಕಾಮಗಾರಿಗೆ ಅನುಮೋದನೆ ನೀಡಲಾಗಿದೆ. ಸದ್ಯ 5 ಸಾವಿರ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಕಾರ್ಮಿಕರು ಹಾಗೂ ಕಾಮಗಾರಿಗಳ ಸಂಖ್ಯೆ ಹೆಚ್ಚುತ್ತದೆ. ಆಸಕ್ತರು ಹತ್ತಿರದ ಗ್ರಾ.ಪಂ. ಅಧಿಕಾರಿಗಳನ್ನು ಸಂಪರ್ಕಿಸಿ ಕೆಲಸದಲ್ಲಿ ತೊಡಗಿಸಿಕೊಳ್ಳಬಹುದು.
>
> **– ಶುಭಂ ಶುಕ್ಲಾ, ಜಿ.ಪಂ. ಸಿಇಒ**



ವಿಬಿ-ಜಿ ರಾಮ್‌ಜಿ ಯೋಜನೆಯ ಪ್ರಮುಖ ಉದ್ದೇಶ ಕೇವಲ ಉದ್ಯೋಗ ನೀಡುವುದಲ್ಲ. ಗ್ರಾಮಗಳಲ್ಲಿ ಶಾಶ್ವತ ಆಸ್ತಿಗಳು ಮತ್ತು ಮೂಲಸೌಕರ್ಯ ನಿರ್ಮಿಸುವುದು ಕೂಡ ಆಗಿದೆ.

ಮುಖ್ಯವಾಗಿ ನೀರಿನ ಭದ್ರತೆ ಉದ್ದೇಶದಿಂದ ಕೆರೆ, ಜಲಸಂರಕ್ಷಣೆ, ನೀರು ಸಂಗ್ರಹಣೆ ಮತ್ತಿತರ ಕಾಮಗಾರಿ, ಗ್ರಾಮೀಣ ಮೂಲಸೌಕರ್ಯ ಹಿನ್ನೆಲೆಯಲ್ಲಿ ಅಗತ್ಯವಿರುವ ಮೂಲಸೌಕರ್ಯ ಕಾಮಗಾರಿ, ಜೀವನೋಪಾಯಕ್ಕೆ ಸಂಬಂಧಿಸಿದ ಮೂಲಸೌಕರ್ಯ ಹಾಗು ಹವಾಮಾನ ವೈಪರೀತ್ಯಗಳಿಂದ ರಕ್ಷಣೆ ನೀಡುವ ಕಾಮಗಾರಿಗನ್ನು ಕೈಗೊಳ್ಳಲಾಗುತ್ತದೆ.

**ನರೇಗಾ-ವಿಬಿ-ಜಿ ರಾಮ್ ಜಿ ವ್ಯತ್ಯಾಸ ಏನು?**

ಭಾರತದ ಗ್ರಾಮೀಣ ಉದ್ಯೋಗ ನೀತಿಯಲ್ಲಿ ಮಹತ್ವದ ಬದಲಾವಣೆ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು 2005ರ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯನ್ನು ರದ್ದುಗೊಳಿಸಿ ಅದರ ಬದಲಿಗೆ ವಿಕಸಿತ ಭಾರತ ರೋಜಗಾರ್ ಮತ್ತು ಅಜೀವಿಕಾ ಮಿಷನ್ ಕಾಯ್ದೆ 2025 ಅನ್ನು ಜಾರಿಗೆ ತಂದಿದೆ. ಈ ಹಿಂದೆ ಇದ್ದ ಎಂಜಿನರೇಗಾ ಯೋಜನೆಯ ಬದಲು ವಿಬಿ-ಜಿ ರಾಮ್ ಜಿ ಯೋಜನೆ ಜಾರಿಗೆ ಬಂದಿದೆ. ಗ್ರಾಮೀಣ ಭಾಗದ ಆರ್ಥಿಕತೆಯನ್ನು ಬಲಪಡಿಸುವ ಮತ್ತು 2047ರ ವೇಳೆಗೆ ವಿಕಸಿತ ಭಾರತ ನಿರ್ಮಾಣದ ಗುರಿಯನ್ನು ಹೊಂದಿದೆ.

**ಕಾರ್ಮಿಕರ ವೇತನ ಏರಿಕೆ**

ನರೇಗಾ ಅಡಿ 264 ಕಾಮಗಾರಿ ನಿಗದಿಪಡಿಸಿದ್ದರೆ ನೂತನ ಯೋಜನೆ 318 ಕೆಲಸಗಳನ್ನು ಹೊಂದಿದೆ. ಕಾರ್ಮಿಕರಿಗೆ 360 ರೂ. ನೀಡುತ್ತಿದ್ದ ವೇತನವನ್ನು 382 ರೂ.ಗೆ ಹೆಚ್ಚಿಸಲಾಗಿದೆ. ಮಾನವ ದಿನಗಳನ್ನು 100 ರಿಂದ 125 ದಿನಕ್ಕೆ ವಿಸ್ತರಿಸಲಾಗಿದೆ. ಒಬ್ಬ ವ್ಯಕ್ತಿ 47,760 ರೂ. ಆದಾಯ ಗಳಿಸಬಹುದು. ಪ್ರಸ್ತುತ ದಿನಗಳಲ್ಲಿ ಬರಗಾಲ ಹೆಚ್ಚಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಭಾಗದಲ್ಲಿ ಕೃಷಿ ಚಟುವಟಿಕೆಗಳು ಬಂದ್ ಆಗಿವೆ. ನಿರುದ್ಯೋಗ ಸಮಸ್ಯೆ ಕಾಡುತ್ತಿರುವ ಮಧ್ಯೆ ವಿಬಿ-ಜಿ ರಾಮ್ ಜಿ ಉದ್ಯೋಗದ ಆಶಾಭಾವ ಮೂಡಿಸಿದೆ.

# ಹಾಸನಾಂಬ ಜಾತ್ರೆ: ಸಿದ್ಧತೆಗೆ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನಾಂಬ ಜಾತ್ರಾ ಮಹೋತ್ಸವವನ್ನು ಅತ್ಯಂತ ಅಚ್ಚುಕಟ್ಟಾಗಿ ನೆರವೇರಿಸಲು ಅಗತ್ಯ ಸಿದ್ಧತೆಗೆ ಕ್ರಮ ವಹಿಸುವಂತೆ ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಾಸನಾಂಬ ಮತ್ತು ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಸಂಬಂಧ ಸಭೆ ನಡೆಸಿ ಮಾತನಾಡಿದ ಅವರು, ದೇವಿ ದರ್ಶನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಯಾವುದೇ ಅಡಚಣೆ ಉಂಟಾಗದಂತೆ ಸುಗಮವಾಗಿ ದೇವಿ ದರ್ಶನ ಮಾಡಿಸುವುದು ನಮ್ಮೆಲ್ಲರ ಕರ್ತವ್ಯ. ಈ ನಿಟ್ಟಿನಲ್ಲಿ ಅಗತ್ಯ ಸಿದ್ಧತೆಗಾಗಿ ಟೆಂಡರ್ ಕರೆಯುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬರುವಂತಹ ಭಕ್ತರಿಗೆ ಹಾಗೂ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗೆ ಮೂಲಸೌಕರ್ಯಗಳನ್ನು ಒದಗಿಸಲು ನಿಗಾವಹಿಸಬೇಕು ಉದಾಸೀನ ಮಾಡಬಾರದು ಎಂದು ತಿಳಿಸಿದರು.

ಬ್ಯಾರಿಕೇಡ್, ವಾಹನ ನಿಲುಗಡೆ, ತಾತ್ಕಾಲಿಕ ಶೌಚಾಲಯ, ಸಾಂಸ್ಕೃತಿಕ ಕಾರ್ಯಕ್ರಮ, ಪ್ರಸಾದ ವಿತರಣೆ, ಜನದಟ್ಟಣೆ ನಿರ್ವಹಣೆ, ವಿಕಲಚೇತನರಿಗೆ ವೀಲ್ ಚೇರ್, ಬರುವ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸೈನ್ ಬೋರ್ಡ್ ಅಳವಡಿಕೆ ಮಾಡಬೇಕು ಎಂದು ತಿಳಿಸಿದರು.




ನಗರದ ಸ್ವಚ್ಛತೆ ಹಾಗೂ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಖಾಸಗಿ ಅವರು ಬ್ಯಾನರ್ ಹಾಕುವ ಮುನ್ನ ಮಹಾನಗರ ಪಾಲಿಕೆಯಿಂದ ಪೂರ್ವಾನುಮತಿ ಪಡೆಯಬೇಕು ಎಂದು ತಿಳಿಸಿದರಲ್ಲದೆ, ಅನುಮತಿ ನೀಡುವಾಗ ಪತ್ರದಲ್ಲಿ ಯಾವ ದಿನಾಂಕ ತೆರವುಗೊಳಿಸಬೇಕು ಎಂಬುದನ್ನು ನಮೂದಿಸಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸೆ.5 ರಂದು ಪ್ರಜಾ ಸೇವೆ ಆಂದೋಲನ ಸಭೆ: ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರ ಅಧ್ಯಕ್ಷತೆಯಲ್ಲಿ ಸೆ.5 ರಂದು ಬೆಳಿಗ್ಗೆ 10 ಗಂಟೆಗೆ ತಾಲ್ಲೂಕು ಮಟ್ಟದ ಪ್ರಜಾ ಸೇವೆ ಆಂದೋಲನ ಸಭೆಯು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ನಡೆಯಲಿದ್ದು, ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಸದರಿ ಸಭೆಯಲ್ಲಿ ಭಾಗವಹಿಸುವಂತೆ ಸೂಚಿಸಿದರು. ಸಾರ್ವಜನಿಕರ ಅಹವಾಲುಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಸಿದ್ದರಿದ್ದು, ಎಲ್ಲಾರು ಒಂದು ತಂಡವಾಗಿ ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸುವಂತೆ ತಿಳಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿಧಿ ಹಾಗೂ ವಿವಿಧ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಮಾದಕ ವ್ಯಸನ: ವಿದ್ಯಾರ್ಥಿಗಳಿಂದ ಜಾಗೃತಿ ಕಾರ್ಯಕ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಯುವಕರಲ್ಲಿ ಹೆಚ್ಐವಿ, ಏಡ್ಸ್ ಹಾಗೂ ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮದ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಮಲೆನಾಡು ತಾಂತ್ರಿಕ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದಿಂದ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಆ. 31 ರಿಂದ ಸೆ. 13ರ ವರೆಗೆ ನಡೆಯಲಿರುವ ಅಭಿಯಾನದಲ್ಲಿ ಕಾಲೇಜಿನ ಎನ್ಎಸ್ಎಸ್ ವಿದ್ಯಾರ್ಥಿಗಳು ಕಾಲೇಜು ಆವರಣ ಮಾತ್ರವಲ್ಲದೆ ಸಾರ್ವಜನಿಕ ವೇದಿಕೆಯಲ್ಲೂ ಅರಿವು ಕಾರ್ಯಕ್ರಮ ನಡೆಸುತ್ತಿದ್ದಾರೆ.

ಮಾದಕ ಪದಾರ್ಥ ಸೇವನೆಯಿಂದ ಆಗುವ ಸಾಮಾಜಿಕ ಮತ್ತು ಆರೋಗ್ಯ ಸಂಬಂಧಿತ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಯುವಜನರಲ್ಲಿ ಮಾದಕ ದ್ರವ್ಯ ವಿರೋಧಿ ಮನೋಭಾವ ಬೆಳೆಸುವುದು, ಆರೋಗ್ಯಕರ ಮತ್ತು ಜವಾಬ್ದಾರಿಯುತ ಜೀವನ ಶೈಲಿಯನ್ನು ಉತ್ತೇಜಿಸುವ ಚಟುವಟಿಕೆಗಳಲ್ಲಿ ಮಕ್ಕಳು ಉತ್ಸಾಹದಿಂದ ಪಾಲ್ಗೊಳ್ಳುತ್ತಿದ್ದಾರೆ.

ಯುವಜನರಲ್ಲಿ ಆರೋಗ್ಯ ಮತ್ತು ಸಾಮಾಜಿಕ ಹೊಣೆಗಾರಿಕೆಯ ಅರಿವು ಮೂಡಿಸುವ ಮೂಲಕ ಮಾದಕ ದ್ರವ್ಯ ಸೇವನೆಯಿಂದ ದೂರವಿರುವಂತೆ ಪ್ರೇರೇಪಿಸುವುದು ಅಭಿಯಾನದ ಆಶಯವಾಗಿದೆ ಎಂದು ಎನ್ಎಸ್ಎಸ್ ಕಾರ್ಯಕ್ರಮಾಧಿಕಾರಿ ಪ್ರೊ. ವಿಜಯಕುಮಾರ್ ಟೈಲಿ ತಿಳಿಸಿದ್ದಾರೆ.

# ಪ್ರಜಾಪ್ರಭುತ್ವ ಉಳಿಯಬೇಕಾದರೆ ಎಡಪಂಥೀಯ ಚಿಂತನೆ ಅನಿವಾರ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವ್ಯವಸ್ಥೆ ಮತ್ತು ಆಡಳಿತಾರೂಢ ಅಧಿಕಾರವನ್ನು ಪ್ರಶ್ನಿಸುವುದೇ ಎಡಪಂಥ. ಪ್ರಶ್ನಿಸುವ ಹಕ್ಕೇ ಪ್ರಜಾಪ್ರಭುತ್ವದ ಜೀವಾಳವಾಗಿರುವಾಗ, ಎಡಪಂಥೀಯ ಚಿಂತನೆಗಳನ್ನು ಟಿಅಪಾಯಕಾರಿಟಿ (ಡೇಂಜರಸ್) ಎಂದು ಬಿಂಬಿಸುವುದು ವಾಸ್ತವವಾಗಿ ಪ್ರಜಾಪ್ರಭುತ್ವವನ್ನೇ ನಾಶಮಾಡುವ ವ್ಯವಸ್ಥಿತ ಹುನ್ನಾರ ಎಂಬ ಅಭಿಪ್ರಾಯ ಇತ್ತೀಚೆಗೆ ನಗರದ ಶ್ರಮ ಕಚೇರಿಯಲ್ಲಿ ಆಯೋಜಿಸಿದ್ದ ಎಡಪಂಥೀಯರು ಡೇಂಜರಸ್ಸಾ ..? ಎಡಪಂಥೀಯರು ಯಾರು? ಎಂಬ ವಿಶೇಷ ಸಂವಾದ ಹಾಗೂ ಮಾತುಕತೆ ಕಾರ್ಯಕ್ರಮದಲ್ಲಿ ವ್ಯಕ್ತವಾಯಿತು.

ಸಾರ್ವಜನಿಕರಲ್ಲಿ ಎಡಪಂಥ ಮತ್ತು ಬಲಪಂಥದ ಬಗ್ಗೆ ಸ್ಪಷ್ಟತೆಯ ಕೊರತೆಯಿದೆ. ಕಮ್ಯುನಿಸ್ಟರು ಮಾತ್ರವೇ ಎಡಪಂಥೀಯರಲ್ಲ; ಕಮ್ಯುನಿಸ್ಟರು ಎಡಪಂಥೀಯರೇ ಆದರೂ, ಎಡಪಂಥ ಕೇವಲ ಕಮ್ಯುನಿಸಂಗೆ ಸೀಮಿತವಲ್ಲ. ಸಮಾಜವಾದಿಗಳು, ಪ್ರಜಾಪ್ರಭುತ್ವವಾದಿಗಳು, ಮಾನವ ಹಕ್ಕುಗಳ ಕಾರ್ಯಕರ್ತರು, ಅಂಬೇಡ್ಕರ್‌ವಾದಿಗಳು, ಗಾಂಧಿವಾದಿಗಳು, ಪತ್ರಕರ್ಯರು, ರೈತ, ಕಾರ್ಮಿಕ, ದಲಿತ, ಮಹಿಳೆಯರು, ಬಡವರ ಪರ ಧ್ವನಿ ಎತ್ತುವವರು ಸೇರಿದಂತೆ ವ್ಯವಸ್ಥೆಯ ಲೋಪಗಳನ್ನು ಪ್ರಶ್ನಿಸುವ ಪ್ರತಿಯೊಬ್ಬರೂ ಎಡಪಂಥೀಯ ಚೌಕಟ್ಟಿನಲ್ಲೇ ಬರುತ್ತಾರೆ.



ಸ್ವಾತಂತ್ರ್ಯ ಚಳವಳಿಯ ಜೀವಾಳ: ಭಾರತದ ಸ್ವಾತಂತ್ರ್ಯ ಹೋರಾಟ ಆರಂಭವಾಗಿದ್ದೇ ಬ್ರಿಟಿಷ್ ಸಾಮ್ರಾಜ್ಯಶಾಹಿ ಅಧಿಕಾರವನ್ನು ಪ್ರಶ್ನಿಸುವ ಎಡಪಂಥೀಯ ಪ್ರಜ್ಞೆಯಿಂದ. ಭಗತ್ ಸಿಂಗ್, ಸುಭಾಷ್ ಚಂದ್ರ ಬೋಸ್, ನೆಹರೂ, ಗಾಂಧೀಜಿಯವರ ಹೋರಾಟದ ಮೂಲದಲ್ಲಿದ್ದುದು ಇದೇ ಪ್ರಶ್ನಿಸುವ ಗುಣ.

ಐತಿಹಾಸಿಕ ಸುಧಾರಕರು ಎಡಪಂಥೀಯರೇ: ಪ್ರಾಚೀನ ರೋಮ್‌ನಲ್ಲಿ ಗುಲಾಮಗಿರಿ ವಿರುದ್ಧ ಸಿಡಿದೆದ್ದ ಸ್ಪಾರ್ಟಕಸ್‌ನಿಂದ ಹಿಡಿದು, ಬುದ್ಧನಿಂದ ಆರಂಭಿಸಿ ಜಾತಿ-ಮತ ಪದ್ಧತಿಯ ಶ್ರೇಣೀಕರಣವನ್ನು ಧಿಕ್ಕರಿಸಿದ ಬಸವಣ್ಣ, ಧಾರ್ಮಿಕ ಮೌಢ್ಯ ಹಾಗೂ ಬ್ರಾಹ್ಮಣ್ಯದ ಅನಿಷ್ಟಗಳನ್ನು ನೇರವಾಗಿ ವಿರೋಧಿಸಿದ ಸ್ವಾಮಿ ವಿವೇಕಾನಂದರವರೆಗೆ ಎಲ್ಲರೂ ಅಂದಿನ ಶೋಷಕ ವ್ಯವಸ್ಥೆಯನ್ನು ಪ್ರಶ್ನಿಸಿದ ಎಡಪಂಥೀಯ ಧಾರೆಗೆ ಸೇರಿದವರಾಗಿದ್ದಾರೆ.

ಪ್ರಶ್ನಿಸಿದರೆ ದೇಶದ್ರೋಹ: 2014 ರ ನಂತರ ದೇಶದಲ್ಲಿ ಅಪಾಯಕಾರಿ ಪ್ರವೃತ್ತಿ ಶುರುವಾಗಿದೆ. ಜನಪರ ನಿಲುವು ತಳೆದು ಸರ್ಕಾರವನ್ನು ಪ್ರಶ್ನಿಸುವ ಸಾಹಿತಿಗಳು, ಪತ್ರಕರ್ತರು, ಯೂಟ್ಯೂಬರ್‌ಗಳು ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ಧ್ವನಿ ಎತ್ತುವವರನ್ನು ದಿಮಾಗಿ ನಕ್ಸಲರು (ಅರ್ಬನ್/ಬೌದ್ಧಿಕ ನಕ್ಸಲರು) ಎಂದು ಜರೆದು ದೇಶದ್ರೋಹದ ಹಣೆಪಟ್ಟಿ ಕಟ್ಟಲಾಗುತ್ತಿದೆ.

ಬಲಪಂಥವೆಂದರೆ ಬಂಡವಾಳಶಾಹಿ ಮತ್ತು ಅಧಿಕಾರದ ರಕ್ಷಣೆ. ಬಲಪಂಥವೆಂಬುದು ಕೇವಲ ಆರ್‌ಎಸ್‌ಎಸ್‌ನಂತಹ ಸಂಘಟನೆಗಳಿಗೆ ಸೀಮಿತವಾದ ಧಾರ್ಮಿಕ ಪರಿಕಲ್ಪನೆಯಲ್ಲ; ಅದೊಂದು ಬಂಡವಾಳಶಾಹಿ ಆರ್ಥಿಕ ಸಿದ್ಧಾಂತ. ಕಾರ್ಪೊರೇಟ್ ಪರ ನಿಲುವು, ಆಸ್ತಿ ಮತ್ತು ಅಧಿಕಾರವನ್ನು ರಕ್ಷಿಸಿಕೊಳ್ಳುವ ಶಕ್ತಿಗಳು (ಉದಾಹರಣೆಗೆ ಡೊನಾಲ್ಡ್ ಟ್ರಂಪ್, ಅದಾನಿ-ಅಂಬಾನಿ ಪರ ಆರ್ಥಿಕ ನೀತಿಗಳು) ಬಲಪಂಥೀಯ ವ್ಯವಸ್ಥೆಯಾಗಿವೆ. ಆರ್‌ಎಸ್‌ಎಸ್‌ನಂತಹ ಮತೀಯ ಸಂಘಟನೆಗಳು ಸದಾ ಅಧಿಕಾರ ಮತ್ತು ಬಂಡವಾಳದ ಜೊತೆ ಕೈಜೋಡಿಸುವುದರಿಂದ ಅವು ಬಲಪಂಥೀಯ ಆಡಳಿತವನ್ನು ಬೆಂಬಲಿಸುತ್ತವೆ ಎಂದು ಮುಖಂಡರು ಹೇಳಿದರು.

ಹಿರಿಯ ಪತ್ರಕರ್ತರಾದ ಆರ್.ಪಿ.ವೆಂಕಟೇಶ್ ಮೂರ್ತಿ, ವೆಂಕಟೇಶ್, ಕಲಾವಿದ ಬಿ.ಎಸ್. ದೇಸಾಯಿ, ಸಾಹಿತಿಗಳಾದ ಹರೀಶ್ ಕಟ್ಟೆಬೆಳಗುಲಿ, ಚಲಂ ಹಾಡ್ಲಹಳ್ಳಿ, ಟಿ.ಆರ್.ವಿಜಯ್ ಕುಮಾರ್, ಅಹ್ಮದ್, ರಾಜ್‌ಕುಮಾರ್, ಕಾರ್ಮಿಕ ಮುಖಂಡರಾದ ಪುಷ್ಪ, ಅರವಿಂದ ಇತರರಿದ್ದರು.

# ಶಾಸಕ ಹೆಚ್.ಕೆ. ಸುರೇಶ್ ಅಭಿವೃದ್ಧಿ ಪಟ್ಟಿ ಬಿಡುಗಡೆ ಮಾಡಲಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಕ್ಷೇತ್ರದ ಅಭಿವೃದ್ಧಿ ವಿಚಾರದಲ್ಲಿ ರಾಜಕೀಯವಾಗಿ ಆರೋಗ್ಯಕರ ಚರ್ಚೆ ನಡೆಸುವ ಬದಲು ವೈಯಕ್ತಿಕ ಟೀಕೆಗೆ ಮುಂದಾಗಿರುವ ಶಾಸಕ ಹೆಚ್.ಕೆ. ಸುರೇಶ್ ಕಳೆದ ಮೂರು ವರ್ಷಗಳಲ್ಲಿ ಯಾವ ಅಭಿವೃದ್ಧಿ ಮಾಡಿದ್ದಾರೆ ಎಂಬುದನ್ನು ಬಹಿರಂಗ ಪಡಿಸಲಿ ಎಂದು ಯುವ ಕಾಂಗ್ರೆಸ್ ಮುಖಂಡ ಶರತ್ ಸವಾಲು ಹಾಕಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಮ್ಮ ನಾಯಕರು ಚುನಾವಣೆಯಲ್ಲಿ ಸೋತ ನಂತರವೂ ಮನೆಯಲ್ಲಿ ಕುಳಿತುಕೊಳ್ಳದೆ ಜನರೊಂದಿಗೆ ನಿರಂತರವಾಗಿ ಬೆರೆತು, ಅವರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ. ಜನರ ಸಂಕಷ್ಟಗಳಿಗೆ ಧ್ವನಿಯಾಗುವುದು ಹಾಗೂ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವುದು ಅವರ ಸ್ವಭಾವ. ಇದನ್ನು ರಾಜಕೀಯ ದೃಷ್ಟಿಯಿಂದ ನೋಡುವ ಅಗತ್ಯವಿಲ್ಲ ಎಂದು ಹೇಳಿದರು.

ತಾಲ್ಲೂಕಿನ ಹಳೇಬೀಡು, ಅಡಗೂರು ಸೇರಿ ಕ್ಷೇತ್ರದ ವಿವಿಧ ಭಾಗಗಳಲ್ಲಿ ಎತ್ತಿನಹೊಳೆ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳಿಂದ ರೈತರಿಗೆ ಅನುಕೂಲವಾಗುತ್ತಿದೆ. ಅಡಗೂರು ಕೆರೆಗೆ ನೀರು ಹರಿದುಬಂದಿರುವುದು ಸೇರಿ ಹಲವು ಕೆರೆಗಳಿಗೆ ನೀರು ತುಂಬುತ್ತಿರುವುದರಿಂದ ಗ್ರಾಮೀಣ ಭಾಗದ ಜನರಲ್ಲಿ ಸಂತಸ ಮೂಡಿದೆ. ಈ ಭಾಗಕ್ಕೆ ನೀರು ಒದಗಿಸುವ ನಿಟ್ಟಿನಲ್ಲಿ ಹಿಂದೆ ಕೈಗೊಂಡಿರುವ ಪ್ರಯತ್ನಗಳು ಹಾಗೂ ಮಾಜಿ ಸಚಿವ ಶಿವರಾಂ ಅವರ ಕೊಡುಗೆಯನ್ನೂ ಪರಿಗಣಿಸಬೇಕು. ಶಿವರಾಂ ಅವರು ನಮಗೆ ಮಾರ್ಗದರ್ಶಕರು. ಅವರ ಮಾರ್ಗದರ್ಶನದಲ್ಲಿಯೇ ನಾವು ಜನಸೇವೆ ಹಾಗೂ ಅಭಿವೃದ್ಧಿಯ ರಾಜಕಾರಣ ಮಾಡುತ್ತಿದ್ದೇವೆ. ವೈಯಕ್ತಿಕ ವಿಚಾರಗಳನ್ನು ಮುಂದಿಟ್ಟುಕೊಂಡು ರಾಜಕೀಯ ಮಾಡುವುದರಿಂದ ಯಾರಿಗೂ ಪ್ರಯೋಜನವಿಲ್ಲ. ರಾಜಕೀಯವನ್ನು ರಾಜಕೀಯವಾಗಿಯೇ ನಡೆಸಬೇಕು. ಅಭಿವೃದ್ಧಿ ವಿಚಾರದಲ್ಲಿ ಯಾರು ಉತ್ತಮ ಕೆಲಸ ಮಾಡಿದ್ದಾರೆ ಎಂಬುದನ್ನು ಜನರೇ ನಿರ್ಧರಿಸುತ್ತಾರೆ ಎಂದರು.

55,785 ಜನರು ಮತ ಚಲಾಯಿಸಿರುವುದು ಅವರ ಮೇಲಿನ ಜನರ ವಿಶ್ವಾಸವನ್ನು ತೋರಿಸುತ್ತದೆ. ಬೇಲೂರು ಕ್ಷೇತ್ರದ ಅಭಿವೃದ್ಧಿ ವಿಚಾರದಲ್ಲಿ ಆರೋಗ್ಯಕರ ಚರ್ಚೆಗೆ ಯುವ ಕಾಂಗ್ರೆಸ್ ಸಿದ್ಧವಿದೆ. ಶಾಸಕರು ಹಾಗೂ ವಿರೋಧ ಪಕ್ಷದ ನಾಯಕರು ಅವಧಿಯಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳ ದಾಖಲೆಗಳನ್ನು ಜನರ ಮುಂದಿಡಲಿ. ವೈಯಕ್ತಿಕ ಟೀಕೆಗಳಿಗೆ ಕಡಿವಾಣ ಹಾಕಿ, ಅಭಿವೃದ್ಧಿಯ ವಿಚಾರದಲ್ಲಿ ಸ್ಪರ್ಧೆ ನಡೆಸುವ ಮೂಲಕ ಕ್ಷೇತ್ರದ ಜನರಿಗೆ ಉತ್ತಮ ಆಡಳಿತ ಹಾಗೂ ಅಭಿವೃದ್ಧಿ ದೊರಕುವಂತೆ ಮಾಡಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕಿಸಾನ್ ಘಟಕದ ತಾಲೂಕು ಅಧ್ಯಕ್ಷ ಕುಮಾರ್, ಯುವ ಘಟಕದ ಪ್ರಧಾನ ಕಾರ್ಯದರ್ಶಿ ಸಚಿನ್, ಉಪಾಧ್ಯಕ್ಷ ಸೈಯದ್ ಇಕ್ಬಾಲ್, ಯೋಜನಾ ಪ್ರಾಧಿಕಾರದ ಸದಸ್ಯ ಸುದರ್ಶನ್ ಇದ್ದರು.

# ಸಹಕಾರಿ ಕ್ಷೇತ್ರ ಅಭಿವೃದ್ಧಿಗೆ ಸೌಹಾರ್ದತೆ ಮುಖ್ಯ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಪರಸ್ಪರ ಸಹಕಾರ ಮತ್ತು ಸೌಹಾರ್ದತೆಯಿಂದ ಮಾತ್ರವೇ ಸಹಕಾರಿ ಕ್ಷೇತ್ರದ ಪ್ರಗತಿ ಸಾಧ್ಯವೆಂದು ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಶಶಿವಾಳ ಗಂಗಾಧರಪ್ಪ ಹೇಳಿದರು.

ಬ್ಯಾಂಕ್ ಸಭಾಂಗಣದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಮೀನು ಅಭಿವೃದ್ಧಿ, ಟ್ರ್ಯಾಕ್ಟರ್ ಖರೀದಿ ಸೇರಿ ಹಲವು ಚಟುವಟಿಕೆಗಳನ್ನು ನಡೆಸಲು ಬ್ಯಾಂಕ್ ವತಿಯಿಂದ ಕಡಿಮೆ ಬಡ್ಡಿ ದರದಲ್ಲಿ ಅನ್ನದಾತರಿಗೆ ಸಾಲ ಸೌಲಭ್ಯ ನೀಡಲಾಗುತ್ತಿದೆ. ಸರ್ಕಾರದ ಸವಲತ್ತುಗಳನ್ನು ಸದ್ಬಳಕೆ ಮಾಡಿಕೊಂಡು ಆರ್ಥಿಕ ಪ್ರಗತಿ ಸಾಧಿಸಿದರೆ ಸೇವೆಗೆ ಸಾರ್ಥಕತೆ ಬರಲಿದೆ. ಸಂಘದ ನಿರ್ದೇಶಕರು, ಷೇರುದಾರರು ಸಹಕಾರ ಪಡೆದು ನಷ್ಟದ ಸುಳಿಯಲ್ಲಿ ಸಿಲುಕಿದ್ದ ಸಂಸ್ಥೆ ಲಾಭದತ್ತ ಮುಖ ಮಾಡಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಸೌಲಭ್ಯ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಬೇಲೂರು ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ದೇಶಾಣಿ ಅವರು ಮಾತನಾಡಿ, ರೈತರು ಪಡೆದ ಸಾಲವನ್ನು ಸಕಾಲಕ್ಕೆ ಪಾವತಿಸಬೇಕು. ಆಗ ಮಾತ್ರ ಸಹಕಾರಿ ಬ್ಯಾಂಕ್ ಪ್ರಗತಿ ಸಾಧಿಸಲು ಸಾಧ್ಯವೆ ಎಂದರು.

ಉಪಾಧ್ಯಕ್ಷ ತಿಪ್ಪನಹಳ್ಳಿ ಪರಮೇಶ್ವರಪ್ಪ, ನಿರ್ದೇಶಕರಾದ ಸಿದ್ದೇಗೌಡ, ಭೋಜಾನಾಯ್ಕ್,ಯಳವಾರೆ ಸಿದ್ದೇಶ್, ರವಿ, ದೇವರಾಜ್, ಮಾಯಮ್ಮ, ಸಿದ್ದಗಂಗಮ್ಮ, ಮನುಜ, ಹರೀಶ್, ಯೋಗೇಶ್ ವ್ಯವಸ್ಥಾಪಕ ಚಂದ್ರು, ಬಾಲನಾಯ್ಕರ್ ಮತ್ತಿತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-04

1882: ಅಮೆರಿಕದ ನ್ಯೂಯಾರ್ಕ್ ನಗರದಲ್ಲಿ ವಿಶ್ವದ ಮೊದಲ ವಿದ್ಯುತ್ ವಾಣಿಜ್ಯ ಪವರ್ ಸ್ಟೇಷನ್‌ಗಳಲ್ಲಿ ಒಂದಾದ ಪರ್ಲ್ ಸ್ಟ್ರೀಟ್ ಸ್ಟೇಷನ್ ಕಾರ್ಯಾರಂಭ ಮಾಡಿತು.

1888: ಅಮೆರಿಕದ ಜಾರ್ಜ್ ಈಸ್ಟ್‌ಮನ್ ಅವರು ಹೆಸರಿನ ಟ್ರೇಡ್‌ಮಾರ್ಕ್‌ಗಾಗಿ ಅರ್ಜಿ ಸಲ್ಲಿಸಿದರು. ಛಾಯಾಗ್ರಹಣ ಕ್ಷೇತ್ರದಲ್ಲಿ ಇದು ಮಹತ್ವದ ಬೆಳವಣಿಗೆಯಾಯಿತು.

1948: ನೆದರ್‌ಲ್ಯಾಂಡ್ಸ್‌ನಲ್ಲಿ ಜೂಲಿಯಾನಾ ರಾಣಿ ಪಟ್ಟಕ್ಕೇರಿದರು. ಅವರ ತಾಯಿ ವಿಲ್ಹೆಲ್ಮಿನಾ ರಾಣಿ ಕೆಲ ದಿನಗಳ ಹಿಂದೆ ರಾಜಪದ ತ್ಯಜಿಸಿದ್ದರು.

1963: ಅಮೆರಿಕದ ನಾಗರಿಕ ಹಕ್ಕುಗಳ ಹೋರಾಟದ ಸಂದರ್ಭದಲ್ಲಿ ಅಲಬಾಮಾದಲ್ಲಿ ಆಫ್ರಿಕನ್-ಅಮೆರಿಕನ್ ಮಕ್ಕಳ ಶಿಕ್ಷಣ ಹಕ್ಕಿಗಾಗಿ ನಡೆದ ಹೋರಾಟಗಳು ತೀವ್ರಗೊಂಡವು.

1998: ಗೂಗಲ್ ಸಂಸ್ಥೆಯನ್ನು ಲ್ಯಾರಿ ಪೇಜ್ ಮತ್ತು ಸರ್ಜೀ ಬ್ರಿನ್ ಅಧಿಕೃತವಾಗಿ ಸ್ಥಾಪಿಸಿದ ಕೆಲವೇ ದಿನಗಳ ನಂತರ, ಸಂಸ್ಥೆಯ ಆರಂಭಿಕ ಹಂತದ ಬೆಳವಣಿಗೆಗೆ ಸೆಪ್ಟೆಂಬರ್ 4 ಮಹತ್ವದ ದಿನವಾಯಿತು.

**ಜನನ**

1825: ಭಾರತದ ಸ್ವಾತಂತ್ರ್ಯ ಹೋರಾಟದ ಪ್ರಮುಖ ನಾಯಕರಲ್ಲಿ ಒಬ್ಬರಾದ ದಾದಾಭಾಯಿ ನವರೋಜಿ

# ಕೊಲೆ ಅಪರಾಧಿಗೆ ಜೀವಾವಧಿ ಶಿಕ್ಷೆ

ಹಾಸನ: ಕ್ಷುಲ್ಲಕ ಕಾರಣಕ್ಕೆ ಗಲಾಟೆ ಮಾಡುತ್ತಾ ಗ್ರಾಮದಲ್ಲಿ ಶಾಂತಿಗೆ ಭಂಗ ತರುವುದನ್ನು ಖಂಡಿಸಿ ಬುದ್ದಿವಾದ ಹೇಳಿದ್ದಕ್ಕೆ ಊರಿನ ಹಿರಿಯನನ್ನೇ ಕೊಲೆ ಮಾಡಿದ್ದ ಅಪರಾಧಿಗೆ ಜಿಲ್ಲಾ ನ್ಯಾಯಾಲಯ ಜೀವಾವಧಿ ಶಿಕ್ಷೆ ಪ್ರಕಟಿಸಿದೆ.

ಬೇಲೂರು ತಾಲ್ಲೂಕು ವಡ್ಡರಹಳ್ಳಿ ಕೊಪ್ಪಲು ಗ್ರಾಮದ ಯಶವಂತ ಅಪರಾಧಿ. ಅದೇ ಗ್ರಾಮದ ಸೋಮಯ್ಯ ಅವರನ್ನು 2022ರ ಜ. 15ರಂದು ಕೊಲೆ ಮಾಡಿದ್ದ. ಮದ್ಯದ ದಾಸನಾಗಿದ್ದ ಯಶವಂತ ಆಗಾಗ ಜನರೊಂದಿಗೆ ಜಗಳ ಮಾಡುತ್ತಿದ್ದ. ರಾಜಿ ಪಂಚಾಯಿತಿ ಸಂದರ್ಭದಲ್ಲಿ ಸೋಮಯ್ಯ ಅವರು ಬುದ್ದಿವಾದ ಹೇಳುತ್ತಿದ್ದರು. ಅಷ್ಟಕ್ಕೆ ದ್ವೇಷ ಸಾಧಿಸಿದ ಯಶವಂತನು ಆ ದಿನ ಸಂಜೆ 6.30ರ ಸಮಯದಲ್ಲಿ ಸೋಮಯ್ಯ ಹಾಗೂ ಇತರರು ವಡ್ಡರಹಳ್ಳಿಗೆ ಕಾಲ್ನಡಿಗೆಯಲ್ಲಿ ಹೋಗುತ್ತಿದ್ದಾಗ ತಡೆದು ವಾಗ್ವಾದ ಶುರು ಮಾಡಿದ್ದ. ಜೊತೆಯಲ್ಲಿದ್ದವರು ಸಮಾಧಾನಪಡಿಸಿ ಕಳುಹಿಸಿದ್ದರು. ಅಷ್ಟಕ್ಕೆ ಸುಮ್ಮನಾಗದ ಆತ ಸಂಜೆ 7ರ ವೇಳೆಗೆ ಮತ್ತೆ ಸೋಮಯ್ಯಗೆ ಮುಖಾಮುಖಿಯಾಗಿ ಗಲಾಟೆ ಮಾಡಿದ್ದನ್ನಲ್ಲದೆ ಕೊಲೆ ಮಾಡುವುದಕ್ಕಾಗಿಯೇ ತಯಾರಿಯೊಂದಿಗೆ ಬಂದಿದ್ದ. ಜೊತೆಗೆ ತಂದಿದ್ದ ಕೊಡಲಿಯಿಂದ 4 ಬಾರಿ ಬಲವಾಗಿ ಹೊಡೆದಿದ್ದ. ಗಂಭೀರ ಗಾಯಗೊಂಡಿದ್ದ ಸೋಮಯ್ಯ ಮೃತಪಟ್ಟಿದ್ದರು.

ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಹಳೇಬೀಡು ಪೊಲೀಸರು ನ್ಯಾಯಾಲಯಕ್ಕೆ ದೋಷಾರಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ 5ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹೆಚ್.ಆರ್.ರವಿಕುಮಾರ್ ಅವರು ಯಶವಂತಗೆ ಜೀವಾವಧಿ ಶಿಕ್ಷೆ ಹಾಗೂ 30 ಸಾವಿರ ರೂ. ದಂಡ ವಿಧಿಸಿ ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ಈ.ಡಿ. ಶ್ರೀನಿವಾಸ್ ವಾದ ಮಂಡಿಸಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248